# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | **122 (1147)** |
| ಸದಸ್ಯರ ಹೆಸರು | : | **ಶ್ರೀ ಜಗದೇವ್ ಗುತ್ತೇದಾರ್** (**ವಿಧಾನ ಸಭೆಯಿಂದ ಚುನಾಯಿತರಾದವರು**) |
| ಉತ್ತರಿಸುವ ದಿನಾಂಕ | : | **19.12.2024** |
| ಉತ್ತರಿಸುವ ಸಚಿವರು | : | **ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು** |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| **ಅ)** | 371ಜೆ ಅಡಿಯ ಕಾನೂನಿನ ಪ್ರಕಾರ ರಾಜ್ಯಾದ್ಯಂತ ಸರ್ಕಾರಿ ನೇಮಕಾತಿಯಲ್ಲಿ ಶೇಕಡ 8ರಷ್ಟು ಮೀಸಲಾತಿಯ ಎಷ್ಟು ಹುದ್ದೆಗಳು ಭರ್ತಿಯಾಗಿದೆ ಹಾಗೂ ಎಷ್ಟು ಹುದ್ದೆಗಳು ಖಾಲಿ ಇವೆ ಹಾಗೂ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡದಿರಲು ಕಾರಣವೇನು; ಯಾವಾಗ ಭರ್ತಿ ಮಾಡಲಾಗುವುದು; | ಭಾರತ ಸರ್ಕಾರವು ದಿನಾಂಕ:01.01.2013 ರಂದು ಭಾರತ ಸಂವಿಧಾನಕ್ಕೆ ತಿದ್ದುಪಡಿ ತಂದು ಅನುಚ್ಛೇದ 371(ಜೆ) ಅನ್ನು ಸೇರ್ಪಡೆಗೊಳಿಸುವುದರ ಮೂಲಕ ಹೈದ್ರಾಬಾದ್ (ಕಲ್ಯಾಣ) ಕರ್ನಾಟಕ ಪ್ರದೇಶಕ್ಕೆ ವಿಶೇಷ ಸ್ಥಾನಮಾನ ನೀಡಿದೆ.<br>ಹೈದ್ರಾಬಾದ್ (ಕಲ್ಯಾಣ) ಕರ್ನಾಟಕ ಪ್ರದೇಶಕ್ಕೆ ಸಾರ್ವಜನಿಕ ಉದ್ಯೋಗದಲ್ಲಿ ಮೀಸಲಾತಿ, ಶಿಕ್ಷಣ ಸಂಸ್ಥೆಗಳಲ್ಲಿ ಮೀಸಲಾತಿಗೆ ಒತ್ತು ನೀಡಲಾಗಿರುತ್ತದೆ. ಭಾರತದ ಸಂಸತ್ತು ಘನತೆವೆತ್ತ ರಾಷ್ಟ್ರಪತಿಗಳ ಆದೇಶದಂತೆ ಘನತೆವೆತ್ತ ರಾಜ್ಯಪಾಲರಿಗೆ ವಿಶೇಷ ಜವಾಬ್ದಾರಿಯನ್ನು ನೀಡಿದ್ದು ಘನತೆವೆತ್ತ ರಾಜ್ಯಪಾಲರು ಹೊರಡಿಸಬಹುದಾದ ಆದೇಶಗಳನ್ನು ಅಂತಿಮಗೊಳಿಸಲು ಸಚಿವ ಸಂಪುಟ ಉಪ ಸಮಿತಿಯನ್ನು ದಿನಾಂಕ:10.06.2013ರ ಅಧಿಕೃತ ಜ್ಞಾಪನದಲ್ಲಿ ರಚಿಸಲಾಗಿದ್ದು, ಸಚಿವ ಸಂಪುಟ ಉಪ ಸಮಿತಿಯು ದಿನಾಂಕ:18.12.2013ರ ಅಧಿಕೃತ ಜ್ಞಾಪನದಂತೆ ಉದ್ಯೋಗ ಮತ್ತು ಶಿಕ್ಷಣದಲ್ಲಿ ಮೀಸಲಾತಿ ಬಗ್ಗೆ ಆಗಾಗ್ಗೆ ಸಭೆ ಸೇರಿ ಪರಿಶೀಲಿಸಿ ಸೂಕ್ತ ನಿರ್ಣಯಗಳನ್ನು ಕೈಗೊಂಡು 371(ಜೆ) ರನ್ವಯ ಮೀಸಲಾತಿ ಅನುಷ್ಠಾನವನ್ನು ಪರಾಮರ್ಶಿಸಲಾಗುತ್ತಿರುತ್ತದೆ.<br>371(ಜೆ) ಕಾಯ್ದೆಯನ್ವಯ ರಾಜ್ಯದಾದ್ಯಂತ ಸರ್ಕಾರಿ ನೇಮಕಾತಿಯಲ್ಲಿ ರಾಜ್ಯಮಟ್ಟದ ಸ್ಥಳೀಯ ವೃಂದದಲ್ಲಿ (ಶೇ.8%) ನೇರ ನೇಮಕಾತಿಯಲ್ಲಿ 9695 ಹುದ್ದೆಗಳನ್ನು ಗುರುತಿಸಲಾಗಿದ್ದು ಈ ಪೈಕಿ 5977 ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. ವಿವಿಧ ನೇಮಕಾತಿ ಸಂಸ್ಥೆಗಳಲ್ಲಿ (ಕೆಪಿಎಸ್ ಸಿ, ಕೆ ಇ ಎ ಇತರೆ) ಒಟ್ಟು |

| | | |
|---|---|---|
| | | 1658 ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಚಾಲನೆಯಲ್ಲಿದ್ದು ಇನ್ನು 2035 ಹುದ್ದೆಗಳ ಭರ್ತಿ ಮಾಡಲು ಕ್ರಮ ಕೈಗೊಳ್ಳಬೇಕಾಗಿರುತ್ತದೆ ಈಗಾಗಲೆ ಕಲಬುರಗಿಯಲ್ಲಿ ದಿನಾಂಕ:17.09.2024 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ನಿರ್ಣಯ ಕೈಗೊಂಡಂತೆ ಕ್ರಮವಹಿಸಲು ದಿನಾಂಕ:08.10.2024ರ ಅನಧಿಕೃತ ಟಿಪ್ಪಣಿಯಲ್ಲಿ ಎಲ್ಲಾ ಇಲಾಖೆಗಳಿಗೆ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸೂಚನೆ ನೀಡಲಾಗಿರುತ್ತದೆ |
| **ಆ)** | 371ಜೆ ಅಡಿಯಲ್ಲಿ ನೇಮಕಾತಿಯಾಗಿರುವ ನೌಕರರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಅದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? | 371 (ಜೆ) ಅಡಿಯಲ್ಲಿ ನೇಮಕವಾಗಿರುವ ನೌಕರರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಈ ಬಗ್ಗೆ ಸಚಿವ ಸಂಪುಟ ಉಪ ಸಮಿತಿ ಸಭೆಯಲ್ಲಿ ಸದರಿ ಅಂಶಗಳನ್ನು ಆದ್ಯತೆ ಮೇಲೆ ಚರ್ಚಿಸಿ ಸಂಬಂಧಪಟ್ಟ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳಿಗೆ ಲಿಖಿತ ಸೂಚನೆ ನೀಡುವುದರ ಮೂಲಕ ಪರಿಹರಿಸಲು ಕ್ರಮ ಕೈಗೊಳ್ಳಲಾಗಿದೆ. |

ಸಂಖ್ಯೆ: ಪಿಡಿಎಸ್ 160 ಹೆಚ್ ಕೆಡಿ 2024

**(ಡಿ.ಸುಧಾಕರ್)**

ಯೋಜನೆ, ಕಾರ್ಯಕ್ರಮ ಸಂಯೋಜನೆ

ಮತ್ತು ಸಾಂಖ್ಯಿಕ ಇಲಾಖೆ ಸಚಿವರು.